**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ, ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಎನ್ ರವಿ ಕುಮಾರ್ ಹಾಗೂ ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಸಿ.ಟಿ ರವಿ ಹಾಗೂ ಇತರರ ನಿಯಮ 330 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ,ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖಾ ಸಚಿವರ ಉತ್ತರ.**

**ಸೂಚನೆ:**

ಸರ್ಕಾರವು ರಾಜ್ಯದಾದ್ಯಂತ ಬಿಪಿಎಲ್ ಮತ್ತು ಇತರೆ ಪಡಿತರ ಚೀಟಿಗಳನ್ನು ವ್ಯಾಪಕವಾಗಿ ರದ್ದುಪಡಿಸಿರುವ ಪರಿಣಾಮವಾಗಿ ಲಕ್ಷಾಂತರ ಬಡ ಕುಟುಂಬಗಳು ಗಂಭೀರ ಸಂಕಷ್ಟವನ್ನು ಎದುರಿಸುತ್ತಿವೆ ಹಾಗೂ ಅಗತ್ಯ ಪಡಿತರಗಳನ್ನು ಮತ್ತು ಸರ್ಕಾರಿ ಯೋಜನೆಗಳನ್ನು ಪಡೆಯುವ ಹಕ್ಕಿನಿಂದ ವಂಚಿತರಾಗುತ್ತಿರುವ ಸ್ಥಿತಿ ನಿರ್ಮಾಣವಾಗಿದೆ. ಏಕಾಏಕಿ ಕೈಗೊಂಡ ಕ್ರಮದಿಂದ ಬಡ ಕುಟುಂಬಗಳಿಗೆ ಆಹಾರ ಭದ್ರತೆ ಸಿಗದೆ ಜೀವನೋಪಾಯಕ್ಕೆ ತೀವ್ರ ಧಕ್ಕೆಯಾಗಿದೆ. ಸರ್ಕಾರದ ಇಂತಹ ನಿರ್ಧಾರದಿಂದ ಹಿರಿಯ ನಾಗರಿಕರು, ದಿನಗೂಲಿ ಕಾರ್ಮಿಕರು ಹಾಗೂ ದುರ್ಬಲ ವರ್ಗದ ಜನರು ಗೊಂದಲಕ್ಕೆ ಒಳಗಾಗಿದ್ದಾರೆ. ಅನೇಕ ಕುಟುಂಬಗಳು ಪಡಿತರ ಚೀಟಿಗಳ ಪುನರ್ ಪರಿಶೀಲನೆಗಾಗಿ ಕಚೇರಿಗಳಿಗೆ ಅಲೆದಾಡುತ್ತಿದ್ದಾರೆ. ಸರ್ಕಾರದಲ್ಲಿ ಹಣಕಾಸಿನ ತೀವ್ರ ಕೊರತೆ ಇರುವ ಕಾರಣ ಪಡಿತರ ಚೀಟಿಗಳನ್ನು ರದ್ದು ಮಾಡಿ, ಸಾರ್ವಜನಿಕರನ್ನು ಹಲವು ಯೋಜನೆಗಳಿಂದ ದೂರವಿಡುವ ಉದ್ದೇಶ ಇದರಲ್ಲಿ ಸ್ಪಷ್ಟವಾಗಿದೆ. ಇಂತಹ ಗಂಭೀರ ಮತ್ತು ಜನಜೀವನಕ್ಕೆ ನೇರವಾಗಿ ತೊಂದರೆಯಾಗುತ್ತಿದೆ. ವಿಷಯವನ್ನು ಸದನದಲ್ಲಿ ವಿವರವಾಗಿ ಚರ್ಚಿಸುವ ಅಗತ್ಯವಿದೆ. ಆದ್ದರಿಂದ, ಬಿಪಿಎಲ್ ಹಾಗೂ ಇತರೆ ಪಡಿತರ ಚೀಟಿಗಳನ್ನು ರದ್ದುಪಡಿಸಿರುವುದರಿಂದ ಸಾರ್ವಜನಿಕರು ತೊಂದರೆಗಿಡಾಗುತ್ತಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಬಯಸುತ್ತೇವೆ.

**ಉತ್ತರ:**

ಕೇಂದ್ರ ಸರ್ಕಾರದಿಂದ ರಾಜ್ಯದಲ್ಲಿ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.

1. CBDT Income Group Annual Income > 1,20,000
2. GSTN Gross Turnover >25 Lacs
3. MCA Individual as Director
4. PDS Duplicate RC Inter State
5. PDS Duplicate RC Intra State
6. PDS RC Member Above 100 Years
7. PDS Silent RC >12 Months
8. PDS Silent RC 6-12 Months
9. PDS Single Member Below 18 Years
10. PM KISAN Land Holding >7.5 Acres
11. UIDAI Aadhaar Status Deceased
12. Vehicle Ownership value Owning LIGHT MOTOR VEHICLE
13. Vehicle Ownership value Owning MEDIUM MOTOR VEHICLE
14. Vehicle Ownership value Owning OTHER THAN MENTIONED ABOVE

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.

1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.
2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು

ಹೊಂದಿರುವ ಎಲ್ಲಾ ಕುಟುಂಬಗಳು.

4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.

ಸದರಿ ಮಾನದಂಡಗಳ ಆಧಾರದ ಮೇಲೆ ಅನರ್ಹವೆಂದು ಕಂಡುಬಂದ ಆದಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ.

ರಾಜ್ಯದಲ್ಲಿರುವ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (PHH) ಬಡತನ ರೇಖೆಗಿಂದ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಈ ಕೆಳಕಂಡರಿತೆ ಕ್ರಮ ವಹಿಸಲು ಸರ್ಕಾರದ ಆದೇಶ ಸಂಖ್ಯೆ: ಇ-ಆನಾಸ 159 ಡಿಆರ್ ಎ2025 (1799618) ದಿನಾಂಕ: 30.10.2025 ರಲ್ಲಿ ಆದೇಶಿಸಿದೆ.

1. ಆದ್ಯತಾ ಪಡಿತರ ಚೀಟಿಗಳನ್ನು (PHH) ಹೊಂದಿರುವ ಅನರ್ಹ ಫಲಾನುಭವಿಗಳನ್ನು ಪತ್ತೆ ಹಚ್ಚಿ ಸದರಿಯವರು ಹೊಂದಿರುವ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸತಕ್ಕದ್ದು.

2. ಈ ರೀತಿ ತಾತ್ಕಾಲಿಕವಾಗಿ ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH)ಪರಿವರ್ತಿಸಲಾದ ಪಡಿತರದಾರರು ಆದ್ಯತಾ ಪಡಿತರ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನಗಳೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕಿನ ತಹಶೀಲಾರರಿಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸತಕ್ಕದ್ದು.

3. ಅನರ್ಹರು ಹೊಂದಿರುವ ಆದ್ಯತಾ ಪಡಿತರ ಚೀಟಿಗಳನ್ನು (PHH) ಆದ್ಯತೇತರ ಪಡಿ ಚೀಟಿಗಳನ್ನಾಗಿ (NPHH)ಪರಿವರ್ತಿಸಿದ ನಂತರ ಯಾವುದೇ ಆಕ್ಷೇಪಣೆ ಸ್ವೀಕೃತವಾಗಿದ್ದಲ್ಲಿ ಅಂತಹ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ (NPHH)ಮುಂದುವರೆಸತಕ್ಕದ್ದು.

4. ಆದ್ಯತಾ ಪಡಿತರ ಚೀಟಿಗಳನ್ನು ಹೊಂದಿರುವ ಅನರ್ಹರನ್ನು ಪತ್ತೆ ಹಚ್ಚಿ ಅವುಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಮಾರ್ಪಡಿಸಿದ ನಂತರ ಅಷ್ಟೇ ಸಂಖ್ಯೆಯ ಆದ್ಯತಾ ಪಡಿತರ ಚೀಟಿಗಳನ್ನು (PHH) ಹೊಸದಾಗಿ ಅರ್ಹ ಫಲಾನುಭವಿಗಳಿಗೆ ನೀಡಲು ಕ್ರಮವಹಿಸತಕ್ಕದ್ದು.

ಈ ರೀತಿ ತಾತ್ಕಾಲಿಕವಾಗಿ ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH) ಪರಿವರ್ತಿಸಲಾದ ಪಡಿತರ ಚೀಟಿದಾರರು ಆದ್ಯತಾ ಪಡಿತರ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸಲು ಕ್ರಮವಹಿಸಲಾಗುತ್ತದೆ. ಅದರಂತೆ ಒಂದು ವೇಳೆ ಅರ್ಹ ಫಲಾನುಭವಿಯ ಆದ್ಯತಾ ಪಡಿತರ ಚೀಟಿಯನ್ನು ರದ್ದುಪಡಿಸಿದಲ್ಲಿ, ಸಂಬಂಧಪಟ್ಟ ತಹಶೀಲ್ದಾರ್‌ಗೆ ಮನವಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಇ-ಆನಾಸ 348 ಡಿಆರ್ ಎ 2025.

(ಕೆ.ಹೆಚ್ ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು